		ಭಟ್ಕಳ	4.00	2.00	2.00	1.83		1.83
		ಹಳಿಯಾಳ	4.00		4.00	1.83		1.83
13	ಉತ್ತರಕನ್ನಡ	ಕಾರವಾರ	4.00	4.00	0.00	1.83		0
		ಕುಮಟಾ	4.00		4.00	1.83	1.83	1.83
		ಶಿರಸಿ	4.00		4.00	1.83		1.83
		ಯಲ್ಲಾಪುರ	4.00		4.00	1.83		1.83
		ಒಟ್ಟು	**24.00**	**6.00**	**18.00**	**10.98**	**1.83**	**9.15**
		13 ಜಿಲ್ಲೆಯ ಒಟ್ಟು	**260.00**	**61.46**	**198.54**	**118.95**	**21.96**	**96.99**

ಟಿಪ್ಪಣಿ:– 2009–10ನೇ ಸಾಲಿನಲ್ಲಿ ವಿಶೇಷ ಘಟಕ & ಗಿರಿಜನ ಉಪಯೋಜನೆ ಶೀರ್ಷಿಕೆಯಡಿ ಕ್ರಮವಾಗಿ ರೂ. 270.00 ಲಕ್ಷ & ರೂ. 119.56 ಲಕ್ಷ ಮಂಡಳಿಗೆ ಹಂಚಿಕೆಯಾಗಿದ್ದು, ಈ ಯೋಜನೆಗಳಡಿ ಪ್ರತೀ ವಿಧಾನಸಭಾ ಕ್ಷೇತ್ರಕ್ಕೆ ಕ್ರಮಬಾಗಿ ರೂ. 4.00 ಲಕ್ಷ & ರೂ. 1.83 ಲಕ್ಷ ಅನುದಾನವನ್ನು ಅಭಿವೃದ್ಧಿ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದ್ದು, ಕಾಮಗಾರಿಗಳ ಪ್ರಗತಿಗನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. 2009–10ನೇ ಸಾಲಿನ ಈ ಯೋಜನೆಗಳ ಕ್ರಿಯಾ ಯೋಜನೆಯು ನವೆಂಬರ್–2009ರ ಅಂತ್ಯದಲ್ಲಿ ಅನುಮೋದನೆಯಾಗಿದ್ದು, 2009–10ನೇ ಸಾಲಿನಲ್ಲಿ ಈ ಕಾಮಗಾರಿಗಳ ಪ್ರಗತಿಯು ಸ್ವಲ್ಪ ಮಟ್ಟಿಗೆ ಕುಂಠಿತವಾಗಿದ್ದು, ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು 2010–11ನೇ ಸಾಲಿನಲ್ಲಿ ಪೂರ್ಣಗೊಳಿಸಲು ಪೂರ್ಣ ಅನುದಾನವನ್ನು ನಿಗದಿಪಡಿಸಿಕೊಳ್ಳಲಾಗಿದೆ. ಪ್ರಸಕ್ತ ಸಾಲಿನಲ್ಲಿ ಸಹಾಯಾನುದಾನ ಶೀರ್ಷಿಕೆಯಡಿ ಸಾಕಷ್ಟು ಅನುದಾನ ಲಭ್ಯವಾಗದೆ ಇದ್ದುದರಿಂದ ಈ ಶೀರ್ಷಿಕೆಯಡಿ ವಿಧಾನಸಭಾವಾರು ಯಾವುದೇ ಹೊಸ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲ.

ಮಂಗಳಾ ಕ್ರೀಡಾಂಗಣ

251 (819) ಶ್ರೀ ಖಾದರ್ ಯು.ಟಿ. (ಮಂಗಳೂರು):– ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ಟೌನ್‌ನಲ್ಲಿರುವ "ಮಂಗಳಾ ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳ ಅನುಕೂಲಕ್ಕಾಗಿ "ಸಿಂಥೆಟಿಕ್ ಟ್ರ್ಯಾಕ್" ಅಳವಡಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಸ್ತುತ ವರ್ಷದಲ್ಲಿಯೇ ಈ ಕೆಲಸವನ್ನು ಮಾಡಲಾಗುವುದೇ; ಈ ಬಗ್ಗೆ ಯಾವುದಾದರೂ ಯೋಜನೆಯನ್ನು ಹಮ್ಮಿಕೊಳ್ಳಲಾಗುವುದೇ; (ವಿವರ ನೀಡುವುದು)?

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು):–

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರ, ಮಂಗಳಾ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಟ್ರ್ಯಾಕ್ ಅಳವಡಿಸುವ ಯೋಜನೆಯು ಸರ್ಕಾರದ ಮುಂದಿದೆ.

ಆ) ಪ್ರಸ್ತುತ 2010–11ನೇ ಸಾಲಿನಲ್ಲಿ ಮಂಗಳೂರಿನ ಮಂಗಳಾ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ಅಳವಡಿಸುವ ಕಾಮಗಾರಿಗಾಗಿ ರೂ. 3.00 ಕೋಟಿ ಅನುದಾನವನ್ನು ಹೆಚ್ಚುವರಿಯಾಗಿ ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಅನುದಾನ ಮಂಜೂರಾದ ಕೂಡಲೇ ಉದ್ದೇಶಿತ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಭೂಮಿ ಕೇಂದ್ರ

252 (820) ಶ್ರೀ ಖಾದರ್ ಯು.ಟಿ. (ಮಂಗಳೂರು):– ಕಂದಾಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಗಳೂರು ತಾಲ್ಲೂಕಿನಲ್ಲಿ ಸ್ಥಾಪಿತವಾಗಿರುವ ಭೂಮಿ ಕೇಂದ್ರದಲ್ಲಿ ಹೆಚ್ಚಿನ ಕೆಲಸದ ಒತ್ತಡದಿಂದಾಗಿ ರೈತರು ಹಾಗೂ ಜನಸಾಮಾನ್ಯರಿಗೆ ತುಂಬಾ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಕೇಂದ್ರಗಳನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸಿ ಜನಸಾಮಾನ್ಯರಿಗೆ ಅನುಕೂಲ ಮಾಡಿಕೊಡಲಾಗುವುದೆ?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):–

ಅ) ಹೌದು

ಆ) ಮಂಗಳೂರು ತಾಲ್ಲೂಕಿನಲ್ಲಿ ಭೂಮಿ ಕೇಂದ್ರವನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸುವ ಪ್ರಸ್ತಾವನೆಯ ಕುರಿತು ಸರ್ಕಾರವು ಪರಿಶೀಲಿಸುತ್ತಿದೆ.

ಪಶ್ಚಿಮ ವಾಹಿನಿ ಯೋಜನೆ

253 (821) ಶ್ರೀ ಖಾದರ್ ಯು.ಟಿ (ಮಂಗಳೂರು) – (ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ಯೋಜನೆಗಳಲ್ಲಿ ಒಂದಾದ ಪಶ್ಚಿಮ ವಾಹಿನಿ ಯೋಜನೆ ಯಾವ ಹಂತದಲ್ಲಿದೆ?

ಆ) ಈ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು